# ಕರ್ನಾಟಕ ವಿಧಾನಪರಿಷತ್ತು

## ನೂರ ನಲವತ್ತ ಮೂರನೆಯ ಅಧಿವೇಶನದ ಮುಂದುವರೆದ ಉಪವೇಶನ

## **ಚುಕ್ಕೆ ರಹಿತ ಪ್ರಶ್ನೆ**

ದಿನಾಂಕ : 05-03-2021 ಪ್ರಶ್ನೆ ಸಂಖ್ಯೆ : 621 (739)

ಸದಸ್ಯರ ಹೆಸರು ಮತ್ತು ಕ್ಷೇತ್ರ : ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)

ಉತ್ತರ ನೀಡಬೇಕಾದ ದಿನಾಂಕ : 05-03-2021

ಉತ್ತರಿಸುವ ಸಚಿವರು: ಮಾನ್ಯ ಕೃಷಿ ಸಚಿವರು

ವಿಷಯ : ಕೃಷಿ ಇಲಾಖೆಯ ಯೋಜನೆ & ಕಾರ್ಯಕ್ರಮಗಳ ಬಗ್ಗೆ

(ಅ) ಉಡುಪಿ ಮತ್ತು ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಕೃಷಿ ಇಲಾಖಾ ಅಧೀನ ಕಛೇರಿಗಳು ಯಾವುವು ; ಈ ಕಛೇರಿಗಳ ಸಂಪರ್ಕ ವಿಳಾಸ ಮತ್ತು ಅಧಿಕಾರಿಗಳ ದೂರವಾಣಿ ಸಂಖ್ಯೆಗಳು ಯಾವುವು; ಮಂಜೂರಾತಿಯಾದ ಹುದ್ದೆಗಳು, ಕಾರ್ಯನಿರ್ವಹಿಸುತ್ತಿರುವ ಮತ್ತು ಖಾಲಿಯಿರುವ ಹುದ್ದೆಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ಮತ್ತು ಕಛೇರಿವಾರು ವಿವರ ಒದಗಿಸುವುದು)

(ಆ) 2020-21ನೇ ಸಾಲಿನಲ್ಲಿ ಅನುಷ್ಠಾನಗೊಳಿಸುತ್ತಿರುವ ಯೋಜನೆಗಳು ಯಾವುವು ; ಅವುಗಳ ಮಾರ್ಗಸೂಚಿಗಳು ಯಾವುವು; ಈ ಯೋಜನೆಗಳಲ್ಲಿ ರೈತರ ಆಯ್ಕೆಗೆ ಇರುವ ಮಾನದಂಡಗಳೇನು; ಸರ್ಕಾರದಿಂದ ಈ ಯೋಜನೆಗಳಿಗೆ ಬಿಡುಗಡೆಯಾದ ಅನುದಾನವೆಷ್ಟು; ಬಿಡುಗಡೆಗೆ ಬಾಕಿಯಿರುವ ಅನುದಾನವೆಷ್ಟು ; (ಯೋಜನೆವಾರು ಮಾಹಿತಿ ಒದಗಿಸುವುದು)

(ಇ) ಸಣ್ಣ ಮತ್ತು ಅತಿ ಸಣ್ಣ ರೈತರಿಗೆ ಕೃಷಿ ಉತ್ತೇಜನ ನೀಡಲು ಸರ್ಕಾರದಿಂದ ಕೈಗೊಂಡ ಕ್ರಮಗಳು ಯಾವುವು ; ಈ ರೈತರು ಹೆಚ್ಚಿನ ಪ್ರಮಾಣದಲ್ಲಿ ಅನುಸರಿಸುವ ಸಾಂಪ್ರದಾಯಿಕ ಕೃಷಿ ಚಟುವಟಿಕೆಯ ಪ್ರೋತ್ಸಾಹಕ್ಕಾಗಿ ಸರ್ಕಾರದಿಂದ ಕೈಗೊಂಡ ಕ್ರಮಗಳಾವುವು ?